*ಕೇಂದ್ರ ಸರ್ಕಾರ ಕೊಳಗೇರಿ ಅಭಿವೃದ್ಧಿಗಾಗಿ ಎಸ್.ಸಿ.ಪಿ. ಯೋಜನೆ ಅಡಿ ಬಿಡುಗಡೆ ಮಾಡಿರುವ ಹಣ.*

145(449) ಶ್ರೀ ಡಿ.ಆರ್. ಪಾಟೀಲ್ (ಗದಗ) :— ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) 98-99 ರಲ್ಲಿ ಕೇಂದ್ರ ಸರ್ಕಾರ ಕೊಳಗೇರಿ ಅಭಿವೃದ್ಧಿಗಾಗಿ ಎಸ್.ಸಿ.ಪಿ. ಯೋಜನೆ ಅಡಿ ಬಿಡುಗಡೆ ಮಾಡಿರುವ ಹಣ ಎಷ್ಟು ಎಂದು ಬಿಡುಗಡೆ ಮಾಡಲಾಗಿದೆ.

ಆ) ಇದರಲ್ಲಿ ರಾಜ್ಯ ಸರ್ಕಾರ ಕೊಳಚೆ ನಿರ್ಮೂಲನ ಮಂಡಳಿಗೆ ಬಿಡುಗಡೆ ಮಾಡಿದ ಹಣವೆಷ್ಟು? ಮತ್ತು ಎಂದು ಬಿಡುಗಡೆ ಮಾಡಲಾಗಿದೆ?

ಶ್ರೀ ಹೆಚ್.ಡಿ. ರೇವಣ್ಣ (ವಸತಿ ಸಚಿವರು) :—

ಅ) ಕೇಂದ್ರ ಸರ್ಕಾರವು 1998-99ನೇ ಸಾಲಿನಲ್ಲಿ ಕೊಳಗೇರಿ ಅಭಿವೃದ್ಧಿಗಾಗಿ ಎಸ್.ಸಿ.ಪಿ. ಯೋಜನೆ ಅಡಿ ಮಂಡಳಿಗೆ ಹಣ ಬಿಡುಗಡೆ ಮಾಡಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

*ಸಾರಿಗೆ ಅದಾಲತ್.*

146(178) ಶ್ರೀರಾಮಲಿಂಗಾರೆಡ್ಡಿ (ಜಯನಗರ) :— ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬೆಂಗಳೂರು ನಗರದಲ್ಲಿ ಇಲ್ಲಿಯವರೆಗೆ ಯಾವ ಯಾವ ವಿಧಾನಸಭಾ ಕ್ಷೇತ್ರಗಳಲ್ಲಿ ಸಾರಿಗೆ ಅದಾಲತ್‌ಗಳನ್ನು ನಡೆಸಲಾಗಿದೆ.

ಆ) ಈ ಅದಾಲತ್‌ಗಳಲ್ಲಿ ಬಂದ ಮನವಿಗಳೆಷ್ಟು ಹಾಗೂ ಅವುಗಳ ಪೈಕಿ ಎಷ್ಟು ಮನವಿಗಳನ್ನು ಪುರಸ್ಕರಿಸಲಾಯಿತು;

ಇ) ಈ ಸಾರಿಗೆ ಅದಾಲತ್‌ನಿಂದ ಹೊಸದಾಗಿ ಯಾವ ಯಾವ ವಿಧಾನಸಭಾ ಕ್ಷೇತ್ರಗಳಲ್ಲಿ ಹೆಚ್ಚುವರಿ ಬಸ್‌ಗಳನ್ನು ಓಡಿಸಲಾಗುತ್ತಿದೆ?

ಈ) ಈ ಅದಾಲತ್‌ಗಳಲ್ಲಿ ಬರತಕ್ಕ ಮನವಿಗಳ ಇತ್ಯರ್ಥಕ್ಕಾಗಿ ಪ್ರತ್ಯೇಕ ವಿಭಾಗವನ್ನು ತೆರೆಯಲಾಗಿದೆಯೇ?